70 (953) ಶ್ರೀ ಧ್ರುವನಾರಾಯಣ ಆರ್. (ಸಂತೆಮರಳ್ಳಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ನೀರಾ ಬಗ್ಗೆ ಸರ್ಕಾರಿ ಆದೇಶ ಮಾಡುವ ಕಾರ್ಯ ಎಲ್ಲಿಯವರೆಗೆ ಬಂದಿದೆ?

ಆ) ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಸಿದ್ದರಾಮಯ್ಯ (ಮಾನ್ಯ ಉಪ ಮುಖ್ಯ ಮಂತ್ರಿಗಳು) :

ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳನ್ನು ಹೊರತುಪಡಿಸಿ, ಮಿಕ್ಕ ಎಲ್ಲಾ ಜಿಲ್ಲೆಗಳಲ್ಲಿ ನೀರಾ/ಸೇಂದಿ ಇಳಿಸುವುದನ್ನು ನಿಷೇಧಿಸಲಾಗಿದೆ. ಈ ದಿಸೆಯಲ್ಲಿ ಮರು ಪರಿಶೀಲನೆಯ ಚಿಂತನೆ ಸದ್ಯಕ್ಕೆ ಇರುವುದಿಲ್ಲ.

ಆ) ಉದ್ಭವಿಸುದಿಲ್ಲ.

72 (1170) ಶ್ರೀರಾಮುಲು ಬಿ. (ಬಳ್ಳಾರಿ) : ಮಾನ್ಯ ಉಪ ಮುಖ್ಯ ಮಂತ್ರಿಗಳು ಕೆಳಕಂಡ ಪ್ರಶ್ನೆಗೆ ಉತ್ತರಿಸುವರೇ?

ಅ) ಬಳ್ಳಾರಿ ಜಿಲ್ಲೆಯಲ್ಲಿ, ಬಳ್ಳಾರಿ ಜಿಲ್ಲೆಯ ಅಭಿವೃದ್ಧಿ ಕಾಮಗಾರಿಗಾಗಿ ರೂ. 3.300 ಕೋಟಿಗಳ ಪ್ಯಾಕೇಜ್‌ನ್ನು ನೀಡುವುದಾಗಿ ಹಿಂದಿನ ಸರ್ಕಾರ ಘೋಷಿಸಿರುವುದು ನಿಜವೇ?

ಆ) ಹಾಗಿದ್ದಲ್ಲಿ, ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆಯಾಗಿದೆ?

ಇ) ಇದರಲ್ಲಿ ಪೂರ್ಣಗೊಂಡ ಮತ್ತು ಅಪೂರ್ಣಗೊಂಡ ಹಾಗೂ ಬಾಕಿ ಉಳಿದಿರುವ ಕಾಮಗಾರಿಗಳು ಯಾವುವು (ವಿವರ ನೀಡುವುದು);

ಈ) ಗುತ್ತಿಗೆ ಆಧಾರದ ಮೇಲೆ ಕಾಮಗಾರಿಗಳನ್ನು ನೀಡಿದ್ದು ಸದರಿ ಕಾಮಗಾರಿಗಳನ್ನು ಗುತ್ತಿಗೆದಾರರು ಪೂರ್ಣಗೊಳಿಸಿದ್ದು ಅವರಿಗೆ ಹಣ ಬಿಡುಗಡೆಯಾಗದೆ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಗುತ್ತಿಗೆದಾರರಿಗೆ ಹಣ ಪಾವತಿಸಲು ಕೂಡಲೆ ಕ್ರಮ ಕೈಗೊಳ್ಳುವುದೇ?

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯ ಮಂತ್ರಿಗಳು) :

ಅ) ಹೌದು.

ಆ) ಬಿಡುಗಡೆಯಾದ ಅನುದಾನದ ವಿವರ ಈ ಕೆಳಗಿನಂತಿದೆ:

ಶಿಕ್ಷಣ – ರೂ. 1500 ಲಕ್ಷಗಳು

ಆರೋಗ್ಯ – ರೂ. 1000 ಲಕ್ಷಗಳು

ರಸ್ತೆ ಮತ್ತು ಸೇತುವೆ – ರೂ. 4002.50 ಲಕ್ಷಗಳು

ಇ) ವಿವರಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.

ಈ) ಹೌದು.

ಉ) ಹೌದು. ಇದು ಸರ್ಕಾರದ ಪರಿಶೀಲನೆಯಲ್ಲಿದೆ.